# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಬೆಳಗಾವಿ
## ಬೆಳಗಾವಿ

ಅಧಿಸೂಚನೆ ಸಂಖ್ಯೆ: ಬೆಜಿನ್ಯಾ/ಆಡಳಿತ/ನೇಮಕಾತಿ/4/2018 ದಿನಾಂಕ: **25/09/2018**

ವಿಷಯ: ಶೀಘ್ರಲಿಪಿಗಾರರ, ಬೆರಳಚ್ಚುಗಾರರ, ಬೆರಳಚ್ಚು ನಕಲುಗಾರರ, ವಾಹನ ಚಾಲಕ, ಆದೇಶ ಜಾರಿಕಾರರು ಮತ್ತು ಸಿಪಾಯಿ ಹುದ್ದೆಗಳ ನೇಮಕಾತಿಯ ಬಗ್ಗೆ.

ಉಲ್ಲೇಖ:

1) ಗೌರವಾನ್ವಿತ ಉಚ್ಛ ನ್ಯಾಯಾಲಯದ ಪತ್ರ ಸಂಖ್ಯೆ: LCA-II 128/2012, ದಿನಾಂಕ 18/09/2018.

*****

ಮೇಲ್ಕಂಡ ಅಧಿಸೂಚನೆಯನ್ವಯ, ಬೆಳಗಾವಿ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ **ಶೀಘ್ರಲಿಪಿಗಾರರ, ಬೆರಳಚ್ಚುಗಾರರ, ಬೆರಳಚ್ಚುನಕಲುಗಾರರ, ವಾಹನ ಚಾಲಕ, ಆದೇಶ ಜಾರಿಕಾರರು ಮತ್ತು ಸಿಪಾಯಿಗಳ ಹುದ್ದೆಗಳಿಗೆ** ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ವಿವಿಧ ಮೀಸಲಾತಿಗಳಿಗೆ ಪ್ರತ್ಯೇಕವಾಗಿ ನಿಗದಿಪಡಿಸಿದ ಅರ್ಜಿ ನಮೂನೆ ಬೆರಳಚ್ಚು/ಗಣಕೀಕೃತ ಪ್ರತಿಯಲ್ಲಿ ಅಭ್ಯರ್ಥಿಗಳು ತಮ್ಮ ಸ್ವಂತ ಕೈಬರಹದಿಂದ ಎಲ್ಲಾ ಅಂಕಣಗಳನ್ನು ಜಾಗರೂಕತೆಯಿಂದ ಭರ್ತಿಮಾಡಿ ದಿನಾಂಕ: 25/10/2018 ರಂದು ಸಂಜೆ **5-45** ಗಂಟೆಯೊಳಗಾಗಿ ಸಲ್ಲಿಸತಕ್ಕದ್ದು.

**ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 25/10/2018 ಸಂಜೆ 5-45 ಗಂಟೆ ಹಾಗೂ ಅರ್ಜಿಗಳನ್ನು ಕೊನೆ ದಿನಾಂಕದವರೆಗೆ ಕಾಯದೆ ಬೇಗನೆ ಸಲಿಸತಕ್ಕದ್ದು.**

**ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಸಂಬಂಧಿಸಿದ ಹುದ್ದೆಯ ಲಕೋಟೆಯ ಮೇಲೆ ಕಡ್ಡಾಯವಾಗಿ ತಾವು ಸಲ್ಲಿಸಲಿಚ್ಛಿಸುವ ಹುದ್ದೆಯ ಹೆಸರನ್ನು ದಪ್ಪ ಅಕ್ಷರಗಳಲ್ಲಿ ತಪ್ಪದೇ ನಮೂದಿಸಬೇಕು.**

ಅರ್ಜಿ ಸಲ್ಲಿಸಬೇಕಾದ ವಿಳಾಸ: ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಳಗಾವಿ
ಜಿಲ್ಲೆ : ಬೆಳಗಾವಿ.

...2.

## I ಶೀಘ್ರಲಿಪಿಗಾರರು (Stenographers)

i) ಹುದ್ದೆಗಳ ಸಂಖ್ಯೆ : 09 (ಒಂಬತ್ತು)

ii) ವೇತನ ಶ್ರೇಣಿ: ರೂ. 27650-650-29600-750-32600-850-36000-950-39800-1100-46400-1250-52650 ಹಾಗೂ ವಿಶೇಷ ವೇತನ ನೀಡಲಾಗುವುದು.

iii) ಹುದ್ದೆಗಳ ವರ್ಗೀಕರಣ:

| | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ | ಯೋಜನಾ ನಿರಾಶ್ರಿತ | ಮಾಜಿ ಸೈನಿಕರು | ಒಟ್ಟು |
|---|---|---|---|---|---|---|
| ಸಾಮಾನ್ಯ | 01 | 01 | 01 | 01 | -- | 04 |
| ಪ್ರವರ್ಗ- IIA | 01 | 01 | -- | -- | -- | 02 |
| ಪ್ರವರ್ಗ- IIIB | -- | -- | -- | -- | 01 | 01 |
| ಪರಿಶಿಷ್ಟ ಜಾತಿ | 01 | -- | 01 | -- | -- | 02 |
| ಒಟ್ಟು | 03 | 02 | 02 | 01 | 01 | 09 |

### ಶೈಕ್ಷಣಿಕ ವಿದ್ಯಾರ್ಹತೆ:

1) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

2) ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಭಾಷೆಯ ಶೀಘ್ರಲಿಪಿ ಸೀನಿಯರ್ ಮತ್ತು ಕನ್ನಡ ಹಾಗೂ ಆಂಗ್ಲ ಭಾಷೆಯ ಬೆರಳಚ್ಚು ಸೀನಿಯರ್ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟರಿಯಲ್ ಪ್ರಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಶೀಘ್ರಲಿಪಿ ಹಾಗೂ ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು.

### ಅರ್ಹತಾ ಪರೀಕ್ಷೆ:

1) ಅಭ್ಯರ್ಥಿಗಳಿಗೆ ಕನ್ನಡ/ಇಂಗ್ಲೀಷ್ ಭಾಷೆಗಳಲ್ಲಿ ಒಂದು ನಿಮಿಷಕ್ಕೆ 120 ಶಬ್ದಗಳಂತೆ 5 ನಿಮಿಷಗಳ ಉಕ್ತಲೇಖನ ನೀಡಿ ನಂತರ 45 ನಿಮಿಷಗಳ ಅವಧಿಯಲ್ಲಿ ಬೆರಳಚ್ಚು ಯಂತ್ರದ ಮೇಲೆ ಲಿಪ್ಯಂತರ ಮಾಡಲು ಹೇಳಲಾಗುವುದು.

## II ಬೆರಳಚ್ಚುಗಾರರು (Typists)

i) ಹುದ್ದೆಗಳ ಸಂಖ್ಯೆ : 13 (ಹದಿಮೂರು)

ii) ವೇತನ ಶ್ರೇಣಿ: ರೂ. 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ವಿಶೇಷ ವೇತನ ನೀಡಲಾಗುವುದು.

iii) ಹುದ್ದೆಗಳ ವರ್ಗೀಕರಣ:

| | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ | ಅಂಗ ವಿಕಲರು | ಮಾಜೀ ಸೈನಿಕರು | ಒಟ್ಟು |
|---|---|---|---|---|---|---|
| ಸಾಮಾನ್ಯ | 01 | 02 | 02 | 01* | -- | 06 |
| ಪ್ರವರ್ಗ- IIA | -- | 01 | 01 | 01** | -- | 03 |
| ಪ್ರವರ್ಗ- IIB | -- | -- | -- | -- | 01 | 01 |
| ಪ್ರವರ್ಗ- IIIA | -- | 01 | -- | -- | -- | 01 |
| ಪರಿಶಿಷ್ಟ ಜಾತಿ | 01 | 01 | -- | -- | -- | 02 |
| ಒಟ್ಟು | 02 | 05 | 03 | 02 | 01 | 13 |

* Hearing Impaired
** Low vision

**ಶೈಕ್ಷಣಿಕ ವಿದ್ಯಾರ್ಹತೆ:**

1) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

2) ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ಸೀನಿಯರ್ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟರಿಯಲ್ ಪ್ರಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು.

**ಅರ್ಹತಾ ಪರೀಕ್ಷೆ:**

1) ಅಭ್ಯರ್ಥಿಗೆ 15 ನಿಮಿಷಗಳ ಅವಧಿಯಂತೆ ಕನ್ನಡ ಹಾಗೂ ಇಂಗ್ಲೀಷ್ ಭಾಷೆಗಳಲ್ಲಿ ಬೆರಳಚ್ಚು ಮಾಡಲು ಉಕ್ತಲೇಖನ ನೀಡಲಾಗುವುದು.

...4.

## III ಬೆರಳಚ್ಚು-ನಕಲುಗಾರರು (Typist-Copyists)

i) ಹುದ್ದೆಗಳ ಸಂಖ್ಯೆ : 03 (ಮೂರು)

ii) ವೇತನ ಶ್ರೇಣಿ: ರೂ. 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ವಿಶೇಷ ವೇತನ ನೀಡಲಾಗುವುದು.

iii) ಹುದ್ದೆಗಳ ವರ್ಗೀಕರಣ:

| | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ | ಅಂಗ ವಿಕಲರು | ಒಟ್ಟು |
|---|---|---|---|---|---|
| ಸಾಮಾನ್ಯ | -- | -- | 01 | 01* | 02 |
| ಪರಿಶಿಷ್ಟ ಜಾತಿ | -- | 01 | -- | -- | 01 |
| ಒಟ್ಟು | -- | 01 | 01 | 01 | 03 |

* Leprosy Cured Person

**ಶೈಕ್ಷಣಿಕ ವಿದ್ಯಾರ್ಹತೆ:**

1) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

2) ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ಜೂನಿಯರ್ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ, ಸೆಕ್ರೆಟೇರಿಯಲ್ ಪ್ರಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು.

**ಅರ್ಹತಾ ಪರೀಕ್ಷೆ:**

1) ಅಭ್ಯರ್ಥಿಗೆ 15 ನಿಮಿಷಗಳ ಅವಧಿಯಂತ ಕನ್ನಡ ಹಾಗೂ ಇಂಗ್ಲೀಷ್ ಭಾಷೆಗಳಲ್ಲಿ ಬೆರಳಚ್ಚು ಮಾಡಲು ಉಕ್ತಲೇಖನ ನೀಡಲಾಗುವುದು.

## IV ವಾಹನ ಚಾಲಕರು (Driver)

i) ಹುದ್ದೆಗಳ ಸಂಖ್ಯೆ : 1 (ಒಂದು)

ii) ವೇತನ ಶ್ರೇಣಿ: ರೂ. 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಇತರ ಭತ್ಯೆಗಳನ್ನು ನೀಡಲಾಗುವುದು.

iii) ಹುದ್ದೆಗಳ ವರ್ಗೀಕರಣ:

| | ಇತರೆ | ಒಟ್ಟು |
|---|---|---|
| ಪರಿಶಿಷ್ಟ ಜಾತಿ | 1 | 1 |
| ಒಟ್ಟು | 1 | 1 |

ಶೈಕ್ಷಣಿಕ ವಿದ್ಯಾರ್ಹತೆ:

1) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

2) ಅಭ್ಯರ್ಥಿಯು ಲಘು (LMV) ಹಾಗೂ ಭಾರಿ(Heavy Badge) ವಾಹನ ಚಾಲನಾ ಪರವಾನಿಗೆ ಪತ್ರವನ್ನು ಸಂಬಂಧಿಸಿದ ಪ್ರಾಧಿಕಾರದಿಂದ ಪಡೆದಿರತಕ್ಕದ್ದು.

ಅರ್ಹತಾ ಪರೀಕ್ಷೆ:

1) ಅಭ್ಯರ್ಥಿಯ ವಾಹನ ಚಾಲನಾ ಅರ್ಹತೆಯನ್ನು ಸಾರಿಗೆ ಇಲಾಖೆಯ ಅಧಿಕಾರಿಗಳಿಂದ ಪ್ರಾಯೋಗಿಕವಾಗಿ ಪರೀಕ್ಷಿಸಲಾಗುವುದು ತದನಂತರ ಮೌಖಿಕ ಸಂದರ್ಶನ ನಡೆಸಲಾಗುವುದು.

## V ಆದೇಶ-ಜಾರಿಕಾರರು (Process-Server)

i) ಹುದ್ದೆಗಳ ಸಂಖ್ಯೆ : 26 (ಇಪ್ಪತ್ತಾರು)

ii) ವೇತನ ಶ್ರೇಣಿ: ರೂ. 19950-450-20400-500-22400-550-24600-600-27000-650-29600-750-32600-850-36000-950-37900 ಹಾಗೂ ಇತರ ಭತ್ಯೆಗಳು ನೀಡಲಾಗುವುದು.

...6.

iii) ಹುದ್ದೆಗಳ ವರ್ಗೀಕರಣ:

| | ಇತರ | ಮಹಿಳಾ ಅಭ್ಯರ್ಥಿ | ಗ್ರಾಮೀಣ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ಅಂಗ ವಿಕಲರು | ಮಾಜಿ ಸೈನಿಕರು | ಒಟ್ಟು |
|---|---|---|---|---|---|---|---|---|
| ಸಾಮಾನ್ಯ | 02 | 05 | 04 | -- | -- | 01* | 01 | 13 |
| ಪ್ರವರ್ಗ- I | -- | 01 | -- | -- | -- | -- | -- | 01 |
| ಪ್ರವರ್ಗ- IIA | -- | 01 | 02 | 01 | 01 | -- | -- | 05 |
| ಪ್ರವರ್ಗ- IIB | -- | 01 | -- | -- | -- | -- | -- | 01 |
| ಪ್ರವರ್ಗ- IIIB | -- | -- | 01 | -- | -- | -- | -- | 01 |
| ಪರಿಶಿಷ್ಟ ಜಾತಿ | 01 | 01 | 01 | -- | -- | -- | 01 | 04 |
| ಪರಿಶಿಷ್ಟ ಪಂಗಡ | -- | 01 | -- | -- | -- | -- | -- | 01 |
| ಒಟ್ಟು | 03 | 10 | 08 | 01 | 01 | 01 | 02 | 26 |

* Low vision

ಶೈಕ್ಷಣಿಕ ವಿದ್ಯಾರ್ಹತೆ:

1) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

2) ಲಘು (LMV) ಹಾಗೂ ಭಾರಿ(Heavy Badge) ವಾಹನ ಚಾಲನಾ ಪತ್ರ ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

## VI ಸಿಪಾಯಿ (Peon)

i) ಹುದ್ದೆಗಳ ಸಂಖ್ಯೆ : 10 (ಹತ್ತು)

ii) ವೇತನ ಶ್ರೇಣಿ: ರೂ. 17000-400-18600-450-20400-500-22400-550-24600-600-27000-650-28950 ಹಾಗೂ ಇತರ ಭತ್ಯೆಗಳು ನೀಡಲಾಗುವುದು.

iii) ಹುದ್ದೆಗಳ ವರ್ಗೀಕರಣ:

| | ಇತರ | ಮಹಿಳಾ ಅಭ್ಯರ್ಥಿ | ಗ್ರಾಮೀಣ | ಮಾಜಿ ಸೈನಿಕರು | ಒಟ್ಟು |
|---|---|---|---|---|---|
| ಸಾಮಾನ್ಯ | 02 | 01 | 01 | 01 | 05 |
| ಪ್ರವರ್ಗ- I | -- | -- | -- | -- | -- |
| ಪ್ರವರ್ಗ- IIA | 01 | -- | -- | -- | 01 |
| ಪ್ರವರ್ಗ- IIB | -- | -- | -- | -- | -- |
| ಪ್ರವರ್ಗ- IIIA | -- | -- | 01 | -- | 01 |
| ಪ್ರವರ್ಗ- IIIB | -- | 01 | -- | -- | 01 |
| ಪರಿಶಿಷ್ಟ ಜಾತಿ | 01 | -- | -- | -- | 01 |
| ಪರಿಶಿಷ್ಟ ಪಂಗಡ | -- | 01 | -- | -- | 01 |
| ಒಟ್ಟು | 04 | 03 | 02 | 01 | 10 |

...7.

ಶೈಕ್ಷಣಿಕ ವಿದ್ಯಾರ್ಹತೆ:

1) ಏಳನೇ ತರಗತಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

2) ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು.

ವಿಶೇಷ ಸೂಚನೆ: 1) 7ನೇ ತರಗತಿಯ ಅಂಕಗಳು ಶ್ರೇಣಿಯಲ್ಲಿದ್ದರೆ (ಗ್ರೇಡ್) ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು ಮತ್ತು ಪಡೆದ ಅಂಕಗಳ ಒಟ್ಟು ಶೇಕಡಾವಾರು ನಮೂದು ಇರುವ ಅಂಕಪಟ್ಟಿಯನ್ನು ಕಡ್ಡಾಯವಾಗಿ ಸಕ್ಷಮ ಪ್ರಾಧಿಕಾರದಿಂದ ಪಡೆದಿರಬೇಕು ಹಾಗೂ ಅಂಕಪಟ್ಟಿಯಲ್ಲಿ ತ್ರೈಮಾಸಿಕ ಅಂಕಗಳಿದ್ದರೆ ಎಲ್ಲಾ ತ್ರೈಮಾಸಿಕ ಅಂಕಗಳನ್ನು ಕ್ರೋಢೀಕರಿಸಿದ ಅಂಕಪಟ್ಟಿಯ ಅಂಕಗಳನ್ನು ಅರ್ಜಿ ನಮೂನೆಯಲ್ಲಿ ನಮೂದಿಸತಕ್ಕದ್ದು ಹಾಗೂ ಅಂಕಪಟ್ಟಿಯು ಕಡ್ಡಾಯವಾಗಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ದೃಢೀಕರಿಸಲ್ಪಟ್ಟಿರತಕ್ಕದ್ದು ಮತ್ತು ಸದರಿ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ದೃಢೀಕರಿಸಲ್ಪಟ್ಟ ಅಂಕಪಟ್ಟಿಯನ್ನು ಸಂದರ್ಶನದ ಸಮಯದಲ್ಲಿ ತಪ್ಪದೇ ಹಾಜರು ಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2) ಮೇಲ್ಕಾಣಿಸಿದ 7ನೇ ತರಗತಿಯ ಅಂಕಪಟ್ಟಿಯು ಈ ಅಧಿಸೂಚನೆಯಲ್ಲಿ ನಮೂದಿಸಿದ ಅರ್ಜಿಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು.

3) ಮೇಲ್ಕಾಣಿಸಿದ 7ನೇ ತರಗತಿಯ ಅಂಕಗಳನ್ನೊಳಗೊಂಡ ಅಂಕಪಟ್ಟಿಯಾಗಿರಬೇಕು ಮತ್ತು ಬೇರೆ ರೀತಿಯಲ್ಲಿ ಅಂದರೆ ಗ್ರೇಡಗಳಲ್ಲಿ ಇದ್ದ ಅಂಕಪಟ್ಟಿಗಳನ್ನು ಲಗತ್ತಿಸಿದರೆ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

4) **7ನೇ ತರಗತಿಯ ಅಂಕಗಳನ್ನೊಳಗೊಂಡ ಅಂಕಪಟ್ಟಿಯು ಸಂಬಂಧಿತ ಮುಖ್ಯೋಪಾಧ್ಯಾಯರಿಂದ ಸಹಿ ಹಾಗೂ ಶಾಲೆಯ ಮೊಹರನ್ನು ಹಾಕಿಸಿಕೊಂಡಿರಬೇಕು ಮತ್ತು ಆ ಅಂಕಪಟ್ಟಿಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಯ ಮೇಲುರುಜುವನ್ನು ಕಡ್ಡಾಯವಾಗಿ ಪಡೆದಿರಬೇಕು. ಹಾಗೇ ಇಲ್ಲದ ಪಕ್ಷದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

ನಿಗದಿತ ಅರ್ಜಿಶುಲ್ಕ :

| ವಿವಿಧ ವರ್ಗೀಕರಣ | ಶೀಘ್ರಲಿಪಿಗಾರರ ಹುದ್ದೆಗೆ | ಬೆರಳಚ್ಚುಗಾರರ ಮತ್ತು ಬೆರಳಚ್ಚು-ನಕಲುಗಾರರ ಹುದ್ದೆಗೆ | ಆದೇಶ ಜಾರಿಕಾರರ ಹುದ್ದೆಗೆ | ಸಿಪಾಯಿ ಹುದ್ದೆಗೆ |
|---|---|---|---|---|
| ಸಾಮಾನ್ಯ ವರ್ಗ, ಪ್ರವರ್ಗ IIA, IIB, IIIA, IIIBಗೆ ಸೇರಿದ ಅಭ್ಯರ್ಥಿಗಳಿಗೆ. | ರೂ. 250/- ಅರ್ಜಿಶುಲ್ಕ ಪಾವತಿಸಬೇಕು. | ರೂ. 200/- ಅರ್ಜಿಶುಲ್ಕ ಪಾವತಿಸಬೇಕು. | ರೂ. 150/- ಅರ್ಜಿಶುಲ್ಕ ಪಾವತಿಸಬೇಕು. | ರೂ. 100/- ಅರ್ಜಿಶುಲ್ಕ ಪಾವತಿಸಬೇಕು. |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-I ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ. | ಶುಲ್ಕ ವಿನಾಯಿತಿ ಇರುತ್ತದೆ. | ಶುಲ್ಕ ವಿನಾಯಿತಿ ಇರುತ್ತದೆ. | ಶುಲ್ಕ ವಿನಾಯಿತಿ ಇರುತ್ತದೆ. | ಶುಲ್ಕ ವಿನಾಯಿತಿ ಇರುತ್ತದೆ. |

ಟಿಪ್ಪಣಿ: ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-I ಹಾಗೂ ಅಂಗವಿಕಲ ಅಭ್ಯರ್ಥಿಗಳು ಸಾಮಾನ್ಯ ವರ್ಗದಡಿಯಲ್ಲಿ ಅರ್ಜಿ ಸಲ್ಲಿಸಲು ಇಚ್ಚಿಸಿದರೆ ಆಯಾ ಹುದ್ದೆಗಳಿಗೆ ನಿಗದಿಪಡಿಸಿದ ಅರ್ಜಿ ಶುಲ್ಕವನ್ನು ಭರಿಸಬೇಕು, ತಪ್ಪಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

...8.

**ಅರ್ಜಿಶುಲ್ಕ ಪಾವತಿಸಬೇಕಾದ ವಿಧಾನ:**

ನಿಗದಿತ ಶುಲ್ಕವನ್ನು ಡಿ.ಡಿ. ಮುಖಾಂತರ ಮಾತ್ರ ಸ್ವೀಕರಿಸಲಾಗುವುದು ಮತ್ತು ಯಾವುದೇ ಎಂ.ಓ./ಚೆಕ್/ಪೋಸ್ಟಲ್ ಆರ್ಡರ/ಚಲನಗಳನ್ನು ಸ್ವೀಕರಿಸಲಾಗುವುದಿಲ್ಲ. ಡಿ.ಡಿ.ಯನ್ನು ಮಾನ್ಯ **ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ, ಜಿಲ್ಲೆ: ಬೆಳಗಾವಿ.** ರವರ ಹೆಸರಿನಲ್ಲಿ ಈ ಅಧಿಸೂಚನೆಯನ್ನು ಹೊರಡಿಸಿದ ದಿನಾಂಕದ ನಂತರ ಹಾಗೂ ಕೊನೆಯ ದಿನಾಂಕದೊಳಗೆ ತೆಗೆದುಕೊಂಡಿರತಕ್ಕದ್ದು ಹಾಗೂ ನಿಗದಿತ ಅರ್ಜಿಯೊಂದಿಗೆ ಲಗತ್ತಿಸಿ ಈ ನ್ಯಾಯಾಲಯಕ್ಕೆ ಕೊನೆಯ ದಿನಾಂಕದೊಳಗೆ ಸಲ್ಲಿಸತಕ್ಕದ್ದು. ಕೊನೆಯ ದಿನಾಂಕ ಮೀರಿ ಬಂದಂತಹ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

**ಎಲ್ಲ ಹುದ್ದೆಗಳಿಗಾಗಿ ಸಾಮಾನ್ಯ ನಿಯಮಗಳು:**

1) ಆಯ್ಕೆಯಾದ ಅಭ್ಯರ್ಥಿಗಳನ್ನು ನೇಮಕಾತಿ ನಿಯಮದಂತೆ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿಡಲಾಗುವುದು

2) ಕನಿಷ್ಠ ವಯೋಮಿತಿ ದಿನಾಂಕ 25.10.2018 ರಂದು 18 ವರ್ಷ ಆಗಿರಲೇಬೇಕು ಹಾಗೂ ಗರಿಷ್ಠ ವಯೋಮಿತಿ 25-10-2018 ರಂದು
   ಸಾಮಾನ್ಯ ವರ್ಗ: 35 ವರ್ಷ,
   ಪ್ರವರ್ಗ IIA, IIB, IIIA, IIIB: 38 ವರ್ಷ,
   ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-I : 40 ವರ್ಷ ಮೀರಿರಬಾರದು.

3) ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜೀ ಸೈನಿಕರಿಗೆ ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು. ಈ ಬಗ್ಗೆ ಮೀಸಲಾತಿ ಕೋರಿದಲ್ಲಿ ಪ್ರಮಾಣಪತ್ರ ಸಲ್ಲಿಸಬೇಕು.

4) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ/ವರ್ಗಾವಣೆ ಪ್ರಮಾಣಪತ್ರ/ಜನನ ದಿನಾಂಕ ತೋರಿಸುವ ದಾಖಲೆಯ ಉದ್ಧೃತ ಭಾಗದ ಪ್ರತಿ ಸಲ್ಲಿಸಬೇಕು.

5) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ I,IIA.IIB,IIIA,IIIB ಗಳ ಮೀಸಲಾತಿ ಪ್ರಮಾಣ ಪತ್ರಗಳನ್ನು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದಲ್ಲಿ) ಪ್ರತಿ ಸಲ್ಲಿಸಬೇಕು.

6) ಗ್ರಾಮೀಣ ಮೀಸಲಾತಿ ಪ್ರಮಾಣಪತ್ರ ನಮೂನೆ 1 ಹಾಗೂ 2 ರಲ್ಲಿ (ಮೀಸಲಾತಿ ಕೋರಿದಲ್ಲಿ) ಪ್ರತಿ ಸಲ್ಲಿಸಬೇಕು.

7) ಶಾಲಾ/ಕಾಲೇಜಿನ ಮುಖ್ಯೋಪಾಧ್ಯಾಯರು/ಪ್ರಾಂಶುಪಾಲರಿಂದ ಪಡೆದ ಒಂದು ನಡತೆ ಪ್ರಮಾಣಪತ್ರ ಹಾಗೂ ಸ್ಥಳೀಯ ಒಬ್ಬರು ಗಣ್ಯ ವ್ಯಕ್ತಿಯಿಂದ ಪಡೆದ 6 ತಿಂಗಳ ಇತ್ತೀಚಿನ ಒಂದು ನಡತೆ ಪ್ರಮಾಣಪತ್ರದ ಪ್ರತಿ ಸಲ್ಲಿಸಬೇಕು.

8) ಸೇವಾ ನಿರತ ಅಭ್ಯರ್ಥಿಗಳು ಅರ್ಜಿಗಳ ಸ್ವೀಕೃತಿಗಾಗಿ ನಿಗದಿಪಡಿಸಲಾದ ದಿನಾಂಕ ಹಾಗೂ ಸಮಯವನ್ನು ಮೀರದಂತೆ ತಮ್ಮ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಮತ್ತು ಸಂಬಂಧಪಟ್ಟ ಪ್ರಾಧಿಕಾರದಿಂದ ನೀಡಲಾದ "ನಿರಾಕ್ಷೇಪಣಾ ಪ್ರಮಾಣಪತ್ರ" ವನ್ನು ಹೊಂದಿರತಕ್ಕದ್ದು.

9) ವಿವಿಧ ಮೀಸಲಾತಿ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣ ಪತ್ರಗಳನ್ನು ಹೊಂದಿರತಕ್ಕದ್ದು. ಗ್ರಾಮೀಣ ಪ್ರವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಕೆನೆಪದರ ಪ್ರಮಾಣಪತ್ರವನ್ನು (Creamy Layer Certificate) ಸಲ್ಲಿಸತಕ್ಕದ್ದು.

10) ಮೇಲ್ಕಂಡ ಪ್ರಯೋಜನಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದಂದು ಅಥವಾ ಅದಕ್ಕಿಂತ ಮುಂಚೆ ಸಕ್ಷಮ ಪ್ರಾಧಿಕಾರಿಗಳು ನೀಡಿದ ಸಂಬಂಧಪಟ್ಟ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.

11) ವಿಕಲಚೇತನರು/ ಮಾಜಿ ಸೈನಿಕರು/ ವಿಧವೆಯರು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.

12) ಮೌಖಿಕ ಪರೀಕ್ಷೆಯ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ (ಜನ್ಮ ದಿನಾಂಕವನ್ನು ಕೋರಿನಲು ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ, ಬೆರಳಚ್ಚು ಪರೀಕ್ಷೆಗಳಪ್ರಮಾಣ ಪತ್ರಗಳು, ಜಾತಿ ಪ್ರಮಾಣ ಪತ್ರ, ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡುಬಂದಲ್ಲಿ, ಆಗ ಅವರ ಅಭ್ಯರ್ಥಿತನವು ತಿರಸ್ಕೃತವಾಗುತ್ತದೆ ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹಾ ಗುರಿಯಾಗಬೇಕಾಗುತ್ತದೆ.

13) ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

14) ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣ ನಿಯಮಗಳು) 1977ರ ಪ್ರಕಾರ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗಧಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

15) ಶೀಘ್ರಲಿಪಿಗಾರರ, ಬೆರಳಚ್ಚುಗಾರರ ಹಾಗೂ ಬೆರಳಚ್ಚು-ನಕಲುಗಾರರ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳು ಆಯ್ಕೆಯಾದ ಮೂರು ತಿಂಗಳ ಒಳಗೆ ಸರ್ಕಾರವು ಅನುಮೋದಿಸಿದ ಏಜೆನ್ಸಿಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಶೇಕಡಾ 60 ಅಂಕಗಳಿಗೆ ಕಡಿಮೆ ಇಲ್ಲದಂತೆ ಪಡೆದು ಪಾಸು ಮಾಡತಕ್ಕದ್ದು.

ಇತರೆ ಸೂಚನೆಗಳು:

1) **ಬೇರೆ ಬೇರೆ ವರ್ಗೀಕರಣಗಳಡಿಯಲ್ಲಿ ಮೀಸಲಾತಿ ಕೋರಿದ ಪಕ್ಷದಲ್ಲಿ ಅಭ್ಯರ್ಥಿಯು ಆಯಾ ವರ್ಗೀಕರಣದಡಿ ಪ್ರತ್ಯೇಕವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಹಾಗೂ ಪ್ರತ್ಯೇಕ ಅರ್ಜಿಗೆ ಶುಲ್ಕವನ್ನು ಡಿ.ಡಿ. ಮುಖಾಂತರ ಪಾವತಿಸತಕ್ಕದ್ದು ಹಾಗೂ ಸದರಿ ಡಿ.ಡಿ.ಯನ್ನು ಆಯಾ ಪ್ರತ್ಯೇಕ ಅರ್ಜಿಗೆ ಲಗತ್ತಿಸಬೇಕು.**

2) **ಒಂದೇ ಅರ್ಜಿಯಲ್ಲಿ ಒಂದಕ್ಕಿಂತ ಹೆಚ್ಚು ಮೀಸಲಾತಿಗಳನ್ನು ಕೋರಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

3) **ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಹಾಕಲು ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸತಕ್ಕದ್ದು ಹಾಗೂ ಪ್ರತ್ಯೇಕ ಅರ್ಜಿಗೆ ಶುಲ್ಕವನ್ನು ಡಿ.ಡಿ. ಮುಖಾಂತರ ಪಾವತಿಸತಕ್ಕದ್ದು ಹಾಗೂ ಸದರಿ ಡಿ.ಡಿ.ಯನ್ನು ಆಯಾ ಪ್ರತ್ಯೇಕ ಅರ್ಜಿಗೆ ಲಗತ್ತಿಸಬೇಕು ಹಾಗೂ ಡಿ.ಡಿ. ಮುಖಾಂತರ ಸಲ್ಲಿಸಿದ ಅರ್ಜಿ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ.**

4) ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿಯೊಂದಿಗೆ ತಮ್ಮ ಮೇಲಧಿಕಾರಿಗಳಿಂದ ಪಡೆದ ನಿರಪೇಕ್ಷಣಾ ಪ್ರಮಾಣಪತ್ರ ಲಗತ್ತಿಸಬೇಕು.

5) ಶೀಘ್ರಲಿಪಿಗಾರರ/ಬೆರಳಚ್ಚುಗಾರರ/ಬೆರಳಚ್ಚು-ನಕಲುಗಾರರ ಹುದ್ದೆಗೆ ನಡೆಸುವ ಅರ್ಹತಾ ಪರೀಕ್ಷೆಯಲ್ಲಿ ಉತ್ತೀರ್ಣಹೊಂದಿದ ಅಭ್ಯರ್ಥಿಗಳ ಹಾಗೂ ಅವರ ನಿಗದಿ ಪಡಿಸಿದ ಶೈಕ್ಷಣಿಕ ಪರೀಕ್ಷೆಗಳ ಅಂಕಗಳ ಒಟ್ಟು ಸರಾಸರಿ ಆಧಾರದ ಮೇಲೆ ಮೆರಿಟ್‌ವೈಸ್ (Meritwise) 1:5ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗಬೇಕು ಹಾಗೂ ಸಂದರ್ಶನ ಪತ್ರ ಬರದೇ ಇರುವ ಅಭ್ಯರ್ಥಿಗಳು ಸಂದರ್ಶನಕ್ಕೆ ಅರ್ಹರಾಗಿಲ್ಲವೆಂದು ಭಾವಿಸತಕ್ಕದ್ದು.

6) ಆದೇಶ-ಜಾರಿಕಾರರ ಹುದ್ದೆಗೆ 1 : 25 ರ ಅನುಪಾತದಲ್ಲಿ ಮತ್ತು ವಾಹನ ಚಾಲಕ ಹಾಗೂ ಸಿಪಾಯಿ ಹುದ್ದೆಗೆ 1 : 10 ರ ಅನುಪಾತದಲ್ಲಿ ನಿಗದಿ ಪಡಿಸಿದ ಶೈಕ್ಷಣಿಕ ಪರೀಕ್ಷೆಗಳ ಅಂಕಗಳ ಒಟ್ಟು ಸರಾಸರಿ ಆಧಾರದ ಮೇಲೆ ಮೆರಿಟ್ ವೈಸ್ (Merit wise) ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗಬೇಕು ಹಾಗೂ ಸಂದರ್ಶನ ಪತ್ರ ಬರದೇ ಇರುವ ಅಭ್ಯರ್ಥಿಗಳು ಸಂದರ್ಶನಕ್ಕೆ ಅರ್ಹರಾಗಿಲ್ಲವೆಂದು ಭಾವಿಸತಕ್ಕದ್ದು.

7) ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವಾಗಲಿ ಅಥವಾ ದೂರವಾಣಿ ಕರೆಗಳನ್ನು ನಡೆಸಲು/ಮಾಡಲು ಅವಕಾಶವಿರುವುದಿಲ್ಲ.

8) ಅಂಗವಿಕಲ ಹುದ್ದೆಗಳಿಗೆ ನಿರ್ದಿಷ್ಟಪಡಿಸಿದ ಅಂಗವಿಕಲ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಬೇರೆ ಅಂಗವಿಕಲತೆ ಇರುವವರನ್ನು ಆಯ್ಕೆಗೆ ಪರಿಗಣಿಸಲಾಗುವುದು.

9) ಮಾಹಿತಿಯನ್ನು ಸಂಪೂರ್ಣವಾಗಿ ಓದಿ ತಿಳಿದುಕೊಂಡು ನಿಗದಿತ ಅರ್ಜಿ ನಮೂನೆಯಲ್ಲಿ ಎಲ್ಲ ಕಾಲಂಗಳನ್ನು ನಿಗದಿತ ಉತ್ತರಗಳಿಂದ ಭರ್ತಿ ಮಾಡಿ ಸಹಿ ಮಾಡಿರತಕ್ಕದ್ದು, ಸರಿಯಾಗಿ ಕಾಲಂಗಳನ್ನು (ಅಂಕಣಗಳನ್ನು) ಭರ್ತಿ ಮಾಡದೇ ಹಾಗೂ ಸಹಿ ಇರದ ಮತ್ತು ಈ ಅಧಿಸೂಚನೆಯೊಂದಿಗೆ ಲಗತ್ತಿಸಿದ ಅರ್ಜಿ ನಮೂನೆಯನ್ನು ಹೊರತು ಪಡಿಸಿ ಬೇರೆ ನಮೂನೆಯಲ್ಲಿ ಸಲ್ಲಿಸಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

10) ಈ ಅಧಿಸೂಚನೆಯ ಎಲ್ಲಾ ಪ್ರಕ್ರಿಯೆಗಳನ್ನು ಕಾಲ-ಕಾಲಕ್ಕೆ ,ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಬೆಳಗಾವಿಯ ಸೂಚನಾ ಫಲಕದ (Notice Board) ಮೇಲೆ ಪ್ರಕಟಿಸಲಾಗುವುದು.

(ಆರ್. ಜೆ. ಸತೀಶ ಸಿಂಗ್)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ.

ಪ್ರತಿಯನ್ನು ವಿಲೇಖಾನಾಧಿಕಾರಿಗಳು ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು ಇವರಿಗೆ ಪ್ರತ್ಯೇಕ ಪತ್ರದೊಂದಿಗೆ ಸಲ್ಲಿಸಲಾಗಿದೆ .

ಪ್ರತಿಯನ್ನು:

1) ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ____________________
(ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳುವಂತೆ ಹಾಗೂ ತಮ್ಮ ಅಧೀನ ನ್ಯಾಯಾಲಯಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ಕಳುಹಿಸುವಂತೆ ಕೋರಿದೆ.)
2) ಉಪನಿರ್ದೇಶಕರು, ಜಿಲ್ಲಾ ಮತ್ತು ವಾರ್ತಾ ಇಲಾಖೆ, ಬೆಳಗಾವಿ
ಇವರಿಗೆ ಪತ್ರಿಕಾ ಪ್ರಕಟಣೆಗಾಗಿ.
3) ಕರ್ನಾಟಕ ರಾಜ್ಯ ಗೆಜಿಟ್ ಪ್ರಕಟಣೆಗಾಗಿ.
4) ಬೆಳಗಾವಿ ಜಿಲ್ಲೆಯ ಎಲ್ಲಾ ತಾಲ್ಲೂಕಿನ ನ್ಯಾಯಾಲಯಗಳ ಪೀಠಾಸೀನಾಧಿಕಾರಿಗಳಿಗೆ
(ಸೂಚನಾ ಫಲಕದಲ್ಲಿ ಪ್ರಕಟಿಸಲು).
5) ಈ ನ್ಯಾಯಾಲಯದ ಸೂಚನಾ ಫಲಕಕ್ಕೆ.

ನ್ಯಾಯಾಲಯದ ಆದೇಶದ ಮೇರೆಗೆ

ಮುಖ್ಯ ಆಡಳಿತಾಧಿಕಾರಿಗಳು
ಜಿಲ್ಲಾ ನ್ಯಾಯಾಲಯ, ಬೆಳಗಾವಿ.

# ಅರ್ಜಿ ನಮೂನೆ

ಗೆ,

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಳಗಾವಿ,
ಜಿಲ್ಲೆ : ಬೆಳಗಾವಿ.

| |
|---|
| ಇತ್ತೀಚಿನ ಪಾಸಪೋರ್ಟ ಅಳತೆಯ ಭಾವಚಿತ್ರ, ಸ್ವಂತ ಸಹಿ ಮಾಡಿ ಲಗತ್ತಿಸುವುದು |

ಮಾನ್ಯರೇ,

ಬೆಳಗಾವಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಅಧಿಸೂಚನೆ ಸಂಖ್ಯೆ: ಜಿಜಿನ್ಯಾ/ಆಡಳಿತ/ನೇಮಕಾತಿ/4/2018 ದಿನಾಂಕ 25-09-2018 ರ ಪ್ರಕಾರ ______________________ ಹುದ್ದೆಗೆ ನಾನು ಈ ಮೂಲಕ ನನ್ನ ವಿವರಗಳೊಂದಿಗೆ ಅರ್ಜಿ ಸಲ್ಲಿಸುತ್ತಿದ್ದೇನೆ.

| | | |
|---|---|---|
| 1. | ಅಭ್ಯರ್ಥಿಯ ಹೆಸರು | |
| 2. | ತಂದೆಯ/ತಾಯಿಯ/ಗಂಡನ ಹೆಸರು | |
| 3. | a. ಪೂರ್ಣ ವಿಳಾಸ | |
| | b. ದೂರವಾಣಿ/ಮೊಬೈಲ್ ಸಂಖ್ಯೆ: | |
| 4. | a. ವಯಸ್ಸು<br>b. ಜನ್ಮ ದಿನಾಂಕ | __________ವರ್ಷ |
| 5. | ಲಿಂಗ | ಪುರುಷ/ಮಹಿಳೆ |
| 6. | ರಾಷ್ಟ್ರೀಯತೆ:<br>ಮತ:<br>ಜಾತಿ/ಉಪಜಾತಿ: | |

| 7. | ಶೈಕ್ಷಣಿಕ ವಿದ್ಯಾರ್ಹತೆಯ ವಿವರಗಳು (ಸ್ವಯಂ ದೃಢೀಕೃತ ಪ್ರಮಾಣಪತ್ರಗಳನ್ನು ಲಗತ್ತಿಸತಕ್ಕದ್ದು) | | | |
|---|---|---|---|---|
| ಉತ್ತೀರ್ಣ ಹೊಂದಿದ ಪರೀಕ್ಷೆಗಳು | ಉತ್ತೀರ್ಣ ಹೊಂದಿದ ವರ್ಷ ಮತ್ತು ನೊಂದಣಿ ಸಂಖ್ಯೆ | ಗರಿಷ್ಟ ಅಂಕಗಳು | ಪಡೆದಿರುವ ಅಂಕಗಳು | ಶೇಕಡಾ ವಾರು ಅಂಕಗಳು |
| ಎ. ಏಳನೇ ತರಗತಿ | | | | |
| ಬಿ. ಎಸ್‌ಎಸ್‌ಎಲ್‌ಸಿ/ತತ್ಸಮಾನ ಪರೀಕ್ಷೆ | | | | |
| ಸಿ. ಇತರೆ ವಿದ್ಯಾರ್ಹತೆಗಳು ಇದ್ದಲ್ಲಿ | | | | |
| 1. ಕನ್ನಡ ಬೆರಳಚ್ಚು ಜೂನಿಯರ್ | | | | |
| 2. ಇಂಗ್ಲೀಷ್ ಬೆರಳಚ್ಚು ಜೂನಿಯರ್ | | | | |
| 3. ಕನ್ನಡ ಬೆರಳಚ್ಚು ಸೀನಿಯರ್ | | | | |
| 4. ಇಂಗ್ಲೀಷ್ ಬೆರಳಚ್ಚು ಸೀನಿಯರ್ | | | | |
| 5. ಕನ್ನಡ ಶೀಘ್ರಲಿಪಿ ಸೀನಿಯರ್ | | | | |
| 6. ಇಂಗ್ಲೀಷ್ ಶೀಘ್ರಲಿಪಿ ಸೀನಿಯರ್ | | | | |

| | | |
|---|---|---|
| 8A. | ಅಭ್ಯರ್ಥಿಯು ಹುದ್ದೆಯ ಯಾವ ವರ್ಗೀಕರಣದಡಿ ಅರ್ಜಿ ಸಲ್ಲಿಸುತ್ತಿರುವವರು (ಇತರೆ/ಪ.ಜಾ/ಪ್ರವರ್ಗ-I,IIA, IIB,IIIA,IIIB,/ಮಾಜಿಸೈನಿಕರು/ಅಂಗವಿಕಲ ಅಭ್ಯರ್ಥಿ) | |
| 8B. | ಜಾತಿ / ಗ್ರಾಮೀಣ / ಕನ್ನಡ ಮಾಧ್ಯಮ / ಮಾಜಿ ಸೈನಿಕ / ಯೋಜನಾ ನಿರಾಶ್ರಿತರು / ಅಂಗವಿಕಲ ಮೀಸಲಾತಿ ಸೌಲಭ್ಯ ಪಡೆಯಬಯಸುವ ಅಭ್ಯರ್ಥಿಗಳು ಸಂಬಂಧಪಟ್ಟ ಅಧಿಕಾರಿಗಳಿಂದ ಪಡೆದ ಪ್ರಮಾಣಪತ್ರಗಳ ಸ್ವಯಂ ದೃಢೀಕೃತ ಪ್ರತಿಗಳನ್ನು ಲಗತ್ತಿರುವ ಬಗ್ಗೆ ವಿವರಗಳು. | |
| 9. | ಅಭ್ಯರ್ಥಿಯು ಭಾರೀ/ಲಘು ವಾಹನ ಚಾಲನೆಯ ಲೈಸೆನ್ಸ್ ಹೊಂದಿರುವರೇ? (ಹೊಂದಿದ್ದಲ್ಲಿ ಚಾಲನ ಪರವಾನಗಿಯ ಸ್ವಯಂ ದೃಢೀಕೃತ ಪ್ರತಿಯನ್ನು ಲಗತ್ತಿಸುವುದು) | |
| 10. | ಡಿ.ಡಿ. ನಂಬರ, ದಿನಾಂಕ ಹಾಗೂ ಪಡೆದುಕೊಂಡ ಬ್ಯಾಂಕಿನ ಹೆಸರು ಮತ್ತು ಶಾಖೆಯನ್ನು ನಮೂದಿಸುವುದು ಅಲ್ಲದೇ ಡಿ.ಡಿ.ಯ ಹಿಂಬದಿಯಲ್ಲಿ ತಮ್ಮ ಹೆಸರು ಹಾಗೂ ಸಲ್ಲಿಸುವ ಹುದ್ದೆಯನ್ನು ತಪ್ಪದೇ ನಮೂದಿಸುವುದು. | |

## ಘೋಷಣೆ

ಈ ಮೇಲೆ ನಮೂದಿಸಿರುವ ಮಾಹಿತಿ ಮತ್ತು ವಿವರಗಳು ನನಗೆ ತಿಳಿದ ಮಟ್ಟಿಗೆ ಸತ್ಯವಾಗಿದ್ದು ಒಂದು ವೇಳೆ ಅವು ಅಸತ್ಯವೆಂದು ಕಂಡುಬಂದಲ್ಲಿ, ತಾವು ತೆಗೆದುಕೊಳ್ಳುವ ತೀರ್ಮಾನಗಳಿಗೆ ಬದ್ಧನಾಗಿರುತ್ತೇನೆ/ಬದ್ಧಳಾಗಿರುತ್ತೇನೆ. ನಾನು ಆಯ್ಕೆಗೊಂಡರೆ ಬೆಳಗಾವಿ ಜಿಲ್ಲಾ ಘಟಕದ ಯಾವುದೇ ನ್ಯಾಯಾಲಯದಲ್ಲಿ ಕರ್ತವ್ಯ ನಿರ್ವಹಿಸಲು ಸಿದ್ಧನಿದ್ದೇನೆ/ಸಿದ್ಧಳಿದ್ದೇನೆ.

ಸ್ಥಳ:

ದಿನಾಂಕ: ಅಭ್ಯರ್ಥಿಯ ಸಹಿ